ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ಸಂಖ್ಯೆ: ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21 ದಿನಾಂಕ:11-01-2021

## ಸುತ್ತೋಲೆ

ವಿಷಯ :2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೋಂದಾಯಿಸಿಕೊಳ್ಳುವ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ :1.ಪಪೂಶಿಇ/ಪರೀಕ್ಷೆ/ಖಾ.ಅ.ನೊ/2020-21 ದಿನಾಂಕ:09.10.2020
2.ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21,ದಿನಾಂಕ:11-11-2020
3.ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21,ದಿನಾಂಕ:30-11-2020
4.ಪಪೂಶಿಇ/ಪರೀಕ್ಷೆ/ಖಾ.ಅ.ನೊ.ದಿ.ವಿ/2020-21,ದಿನಾಂಕ:04-01-2021

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳನ್ವಯ 2021ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೋಂದಾಯಿಸಿಕೊಳ್ಳಲು ಉಲ್ಲೇಖಿತ(1)ರ ಸುತ್ತೋಲೆಯಲ್ಲಿ 26-11-2020 ರವರೆಗೆ ಅವಕಾಶ ನೀಡಲಾಗಿತ್ತು. ಉಲ್ಲೇಖ (2)ರಲ್ಲಿ ಸದರಿ ದಿನಾಂಕವನ್ನು 12-12-2020 ರವರೆಗೆ ವಿಸ್ತರಿಸಲಾಗಿತ್ತು. ಉಲ್ಲೇಖ (3)ರನ್ವಯ ಸದರಿ ದಿನಾಂಕವನ್ನು 02-01-2021 ರವರೆಗೆ ವಿಸ್ತರಿಸಲಾಗಿತ್ತು. ಹಾಗೂ ಉಲ್ಲೇಖ (4)ರನ್ವಯ ಸದರಿ ದಿನಾಂಕವನ್ನು 08-01-2021 ರವರೆಗೆ ವಿಸ್ತರಿಸಲಾಗಿತ್ತು.

ಆದರೆ ವಿದ್ಯಾರ್ಥಿಗಳ ಮನವಿಗಳ ಮೇರೆಗೆ ಖಾಸಗಿ ಅಭ್ಯರ್ಥಿಯಾಗಿ ನೊಂದಾಯಿಸಿಕೊಳ್ಳುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರ ಸ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ಕಡೇ ದಿನಾಂಕ | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಅರ್ಜಿಗಳನ್ನು Online ನಲ್ಲಿ ಭರ್ತಿ ಮಾಡಲು ಕೊನೆಯ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ಶುಲ್ಕದ ಜೊತೆಗೆ ದಂಡ ಶುಲ್ಕ 500/-ರೂ. +ವಿಶೇಷ ದಂಡ ಶುಲ್ಕ 350/-ರೂ.ಗಳು | 11-01-2021 ರಿಂದ 22-01-2021 | 25-01-2021 | 25-01-2021 | 27-01-2021 |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು Online portalನಲ್ಲಿ update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು update ಮಾಡಿರುವುದಕ್ಕೆ ಸಂಬಂಧಿಸಿದಂತೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ: 28-01-2021.

(ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ.)

ಜಂಟಿ ನಿರ್ದೇಶಕರು (ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು) ಪ್ರತಿಯನ್ನು ಕಾಲೇಜಿನ ಸೂಚನಾ ಫಲಕದಲ್ಲಿ ಅಂಟಿಸಲು ತಿಳಿಸಿದೆ.
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ
4. ಗಣಕಶಾಖೆಗೆ